**ಕರ್ನಾಟಕ ಸರ್ಕಾರ**

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2019–20 :** **ದಿನಾಂಕ : 01–02–2020**

## ಪತ್ರಿಕಾ ಆಮಂತ್ರಣ

**1. ಆಯುಷ್ ಇಲಾಖೆವತಿಯಿಂದ ರಥಸಪ್ತಮಿ ಯೋಗ ಉತ್ಸವ – 2020:**

**ಉದ್ಘಾಟನೆ:**

**ಬಿ.ಎಸ್. ಯಡಿಯೂರಪ್ಪ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.**

**ಉಪಸ್ಥಿತರು:**

**ಶ್ರೀರಾಮುಲು,**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.**

**ದಿನಾಂಕ: 02–02–2020 ಭಾನುವಾರ, ಸಮಯ: ಬೆಳಿಗ್ಗೆ : 6.30 ರಿಂದ 8.30 ಗಂಟೆವರೆಗೆ**

**ಸ್ಥಳ: ವಿಧಾನಸೌಧದ ಮುಂಭಾಗ, ಬೆಂಗಳೂರು.**

ನೂತನ ಶಾಸಕರ ಪ್ರಮಾಣ ವಚನ ಸ್ವೀಕಾರ :

ರಿಜ್ವಾನ್ ಅರ್ಷದ್, ಶಿವಾಜಿನಗರ
ದಿನಾಂಕ : 03–02–2020 ಸೋಮವಾರ, ಸಮಯ : ಅಪರಾಹ್ನ 12–30 ಗಂಟೆಗೆ
ಸ್ಥಳ : ಸಭಾಧ್ಯಕ್ಷರ ಕೊಠಡಿ ಸಂಖ್ಯೆ 125, ವಿಧಾನ ಸೌಧ, ಬೆಂಗಳೂರು

**2. ಬೆಂಗಳೂರು ವಿಭಾಗದ 2019–20 ನೇ ಸಾಲಿನ ಕನ್ನಡ ಮಾಧ್ಯಮ ಪ್ರಶಸ್ತಿ ಪ್ರದಾನ ಸಮಾರಂಭ**

**ಉದ್ಘಾಟನೆ:**

**ಆರ್. ಅಶೋಕ್.**

ಕಂದಾಯ ಮತ್ತು ಪೌರಾಡಳಿತ ಸಚಿವರು.

<u>ಪ್ರಶಸ್ತಿ ಪ್ರದಾನ:</u>

ಸಿ.ಟಿ. ರವಿ,
ಕನ್ನಡ ಮತ್ತು ಸಂಸ್ಕೃತಿ, ಪ್ರವಾಸೋದ್ಯಮ ಹಾಗೂ ಸಕ್ಕರೆ ಸಚಿವರು.

<u>ಪ್ರಾಸ್ತಾವಿಕ ನುಡಿ:</u>

ಟಿ.ಎಸ್. ನಾಗಾಭರಣ,
ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ

<u>ಹಿತನುಡಿ:</u>

ಹೆಚ್. ದುಂಡಿರಾಜ್,
ಖ್ಯಾತ ಕವಿ

<u>ಅಧ್ಯಕ್ಷತೆ:</u>

ರಿಜ್ವಾನ್ ಅರ್ಷದ್,
ಶಾಸಕರು
ಶಿವಾಜಿನಗರ ವಿಧಾನಸಭಾ ಕ್ಷೇತ್ರದ

ದಿನಾಂಕ: 02–02–2020 ಭಾನುವಾರ, ಸಮಯ : ಬೆಳಿಗ್ಗೆ 10.30 ಗಂಟೆಗೆ.

ಸ್ಥಳ ಡಾ. ಬಿ. ಆರ್. ಅಂಬೇಡ್ಕರ್ ಭವನ, ವಸಂತನಗರ, ಮಿಲ್ಲರ್ಸ್ ರಸ್ತೆ, ಬೆಂಗಳೂರು – 560 052.

3. ಭಾರತದ ಪ್ರಪ್ರಥಮ ಮಿನಿ ಒಲಂಪಿಕ್ ಕ್ರೀಡಾಕೂಟ –2020 :
ಉದ್ಘಾಟನೆ :

ಬಿ.ಎಸ್. ಯಡಿಯೂರಪ್ಪ,
ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

**ಕ್ರೀಡಾ ಜ್ಯೋತಿ ಸ್ವೀಕಾರ :**

**ಕೆ.ಎಸ್. ಈಶ್ವರಪ್ಪ,**
**ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು**

**ಸ್ಥಳ : ಶ್ರೀ ಕಂಠೀರವ ಹೊರಾಂಗಣ ಕ್ರೀಡಾಂಗಣ, ಬೆಂಗಳೂರು**
**ದಿನಾಂಕ : 3–02–2020 ಸೋಮವಾರ ಸಮಯ : ಸಂಜೆ 5–00 ಗಂಟೆಗೆ**

## ಪತ್ರಿಕಾ ಪ್ರಕಟಣೆ

## ಫೆಬ್ರವರಿ 4 ರಂದು ರಾಜ್ಯ ಸರ್ಕಾರದ ನಾಲ್ಕು ಹೊಸ ಸೇವೆಗಳಿಗೆ ಚಾಲನೆ

**ಬೆಂಗಳೂರು ಫೆಬ್ರವರಿ 1 (ಕರ್ನಾಟಕ ವಾರ್ತೆ)**

**ರಾಜ್ಯ ಸರ್ಕಾರದ ನಾಲ್ಕು ಹೊಸ ಸೇವೆಗಳಿಗೆ ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪ ಅವರು ಫೆಬ್ರವರಿ 4 ರಂದು ಚಾಲನೆ ನೀಡಲಿದ್ದಾರೆ.** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಜನಸ್ನೇಹಿ ಸಹಾಯ ವೇದಿಕೆ ಮತ್ತು ಜನಸ್ನೇಹಿ ಸಹಾಯವಾಣಿ ಹಾಗೂ ಕಾರ್ಮಿಕ ಇಲಾಖೆಯ ಆಶಾದೀಪ ಯೋಜನೆಯ ಅಂತರ್ಜಾಲ ಮತ್ತು ಕಾರ್ಮಿಕ ಸಹಾಯವಾಣಿ ಸೇವೆಗಳನ್ನು ಮುಖ್ಯಮಂತ್ರಿ ಲೋಕಾರ್ಪಣೆ ಮಾಡಲಿದ್ದಾರೆ.

ವಿಧಾನಸೌಧದ ಮೂರನೇ ಮಹಡಿಯಲ್ಲಿರುವ ಸಮ್ಮೇಳನ ಸಭಾಂಗಣದಲ್ಲಿ ಅಂದು ಸಂಜೆ 5.30 ಗಂಟೆಗೆ ಹಮ್ಮಿಕೊಂಡಿರುವ ಈ ಕಾರ್ಯಕ್ರಮದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಸಕಾಲ ಹಾಗೂ ಕಾರ್ಮಿಕ ಸಚಿವ ಎಸ್. ಸುರೇಶ್ ಕುಮಾರ್ ಮುಖ್ಯಮಂತ್ರಿಗಳ ಇ–ಆಡಳಿತ ಸಲಹೆಗಾರ ಬೇಳೂರು ಸುದರ್ಶನ ಹಾಗೂ ರಾಜ್ಯದ ಮುಖ್ಯ ಕಾರ್ಯದರ್ಶಿ ಟಿ ಎಂ ವಿಜಯ್ ಭಾಸ್ಕರ್ ಅವರು ಪಾಲ್ಗೊಳ್ಳಲಿದ್ದಾರೆ.

ಏನಿದು ಸಹಾಯ ವೇದಿಕೆ ?

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ “ಜನಸ್ನೇಹಿ” ಸಹಾಯ ವೇದಿಕೆಯಲ್ಲಿ ಸಾರ್ವಜನಿಕ ಹಿತಾಸಕ್ತಿಯ ಕುಂದು–ಕೊರತೆಗಳನ್ನು ಮೊಬೈಲ್ ದೂರವಾಣಿ ಸಂಖ್ಯೆ : 99802 99802 ಗೆ ವಾಟ್ಸ್ ಆಪ್ ಕಳುಹಿಸುವ ಮೂಲಕ ಅಥವಾ ಇಲಾಖೆಯ ಟ್ವೀಟರ್ ಖಾತೆ @Karnataka_dipr ಮೂಲಕ ಟ್ವೀಟ್ ಮಾಡುವ ಮೂಲಕ ಅಹವಾಲುಗಳನ್ನು ಸರ್ಕಾರದ ಗಮನಕ್ಕೆ ತರಬಹುದಾಗಿದೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಇಂತಹ ಅಹವಾಲುಗಳನ್ನು ಸಂಬಂಧಪಟ್ಟ ಇಲಾಖೆಗಳ ಗಮನಕ್ಕೆ ತಂದು ಜನರ ಅಹವಾಲುಗಳಿಗೆ ಪರಿಹಾರ ಕಂಡುಕೊಳ್ಳುವ ಜನಸ್ನೇಹಿ ವೇದಿಕೆಯಾಗಿ ಕಾರ್ಯನಿರ್ವಹಿಸಲಿದೆ.

ಪ್ರಾಯೋಗಿಕವಾಗಿ ಈ ಸೇವೆಯನ್ನು ಕಳೆದ ಒಂದು ತಿಂಗಳಿನಿಂದ ಪ್ರಾರಂಭಿಸಲಾಗಿದ್ದು ಪ್ರಮುಖ ವಿಷಯಗಳಿಗೆ ಸಂಬಂಧಿಸಿದ ಹಲವು ಅಹವಾಲುಗಳಿಗೆ ವಿವಿಧ ಇಲಾಖೆಗಳಿಂದ ಪರಿಹಾರ ದೊರಕಿಸಿಕೊಡುವಲ್ಲಿ ಇಲಾಖೆ ಯಶಸ್ವಿಯಾಗಿದೆ.

**ಆಶಾದೀಪ ಯೋಜನೆ – ಕಾರ್ಮಿಕ ಸಹಾಯವಾಣಿ !**

ರಾಜ್ಯದಲ್ಲಿ ಪ್ರಪ್ರಥಮವಾಗಿ ಕಾರ್ಮಿಕರ ಸಮಸ್ಯೆಗಳನ್ನು ಬಗೆಹರಿಸುವ ಪ್ರಾಮಾಣಿಕ ಪ್ರಯತ್ನವೇ **ಆಶಾದೀಪ ಯೋಜನೆ – ಕಾರ್ಮಿಕ ಸಹಾಯವಾಣಿ**. ವಿವಿಧ ಕ್ಷೇತ್ರಗಳಲ್ಲಿನ ಕಾರ್ಮಿಕರಿಗೆ ಸೂಕ್ತ ಮಾಹಿತಿಯನ್ನು ನೀಡಲು ಮತ್ತು ಅವರ ಕುಂದು ಕೊರತೆಗಳ ಬಗ್ಗೆ ದೂರನ್ನು ಸ್ವೀಕರಿಸಿ ಪರಿಹಾರ ಕಲ್ಪಿಸುವ ಸದುದ್ದೇಶದಿಂದ ಕಾರ್ಮಿಕ ಇಲಾಖೆಯು ಬನ್ನೇರುಘಟ್ಟ ರಸ್ತೆಯಲ್ಲಿರುವ ತನ್ನ ಪ್ರಧಾನ ಕಚೇರಿಯ ಆವರಣದಲ್ಲಿ ದಿನದ 24 ಗಂಟೆ ವಾರದ ಏಳು ದಿನಗಳೂ ಹಾಗೂ ವರ್ಷದ 365 ದಿನಗಳೂ ಕಾರ್ಯನಿರ್ವಹಿಸುವ ನಿಯಂತ್ರಣಾ ಕೊಠಡಿಯನ್ನು ಸ್ಥಾಪಿಸಿದೆ.

ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಕಟ್ಟಡದ ನಾಲ್ಕನೇ ಮಹಡಿಯಲ್ಲಿ ಸ್ಥಾಪಿಸಿರುವ ಈ ನಿಯಂತ್ರಣಾ ಕೊಠಡಿಯನ್ನು ಕಾರ್ಮಿಕರು ತಮ್ಮ ಕುಂದು–ಕೊರತೆಗಳನ್ನು ಹಾಗೂ ಸಮಸ್ಯೆಗಳನ್ನು ಶುಲ್ಕ–ರಹಿತ ಸಹಾಯವಾಣಿ ಸಂಖ್ಯೆ : 155214 ಕ್ಕೆ ಕರೆ ಮಾಡುವುದರ ಮೂಲಕ ಸಂಪರ್ಕಿಸಿ ಅಹವಾಲುಗಳನ್ನು ನೋಂದಾಯಿಸಬಹುದಾಗಿದೆ. ಅಲ್ಲದೆ, ವಾಟ್ಸಾಪ್ ಸಂಖ್ಯೆ : 93333 33684 ರ ಮೂಲಕವೂ ದಾಖಲಿಸಬಹುದಾಗಿದೆ.

ಅಲ್ಲದೆ, ಕಾರ್ಮಿಕ ಇಲಾಖೆಯ ಸಾಮಾಜಿಕ ಜಾಲ ತಾಣಗಳಾದ ಇ–ಮೇಲ್, ಟ್ವಿಟರ್, ವಾಟ್ಸ್ ಆಪ್, ಟೆಲಿಗ್ರಾಂ ಅಥವಾ ಎಸ್‌ಎಂಎಸ್ ಮೂಲಕವೂ ಮಾಹಿತಿ ಪಡೆಯಬಹುದು ಅಥವಾ ಸಲಹೆ ನೀಡಬಹುದಾಗಿದೆ. ಈ ಸಹಾಯವಾಣಿಯು ತೊಂದರೆಯಲ್ಲಿ ಇರುವ ಅಥವಾ ನೊಂದ ಕಾರ್ಮಿಕರಿಗೆ ಭಾವನಾತ್ಮಕ ಬೆಂಬಲವನ್ನು ನೀಡಲಿದೆ.

ಈ ಸಹಾಯವಾಣಿಯು ಕೈಗಾರಿಕಾ ರಾಸಾಯನಿಕ ಅಪಘಾತಗಳು ಮತ್ತು ವಿಪತ್ತುಗಳ ಸಂದರ್ಭದಲ್ಲಿ ತುರ್ತು ಪರಿಸ್ಥಿತಿಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಸಹಾಯಕವಾಗುವ "ತುರ್ತು ನಿಯಂತ್ರಣಾ ಕೇಂದ್ರ" ವಾಗಿಯೂ ಕೂಡಾ ಕಾರ್ಯನಿರ್ವಹಿಸಲು ಸಜ್ಜಾಗಿದೆ.

ಇದು ಮಹಿಳಾ ಕಾರ್ಮಿಕರಿಗೂ ಸಕಾಲಿಕ ನೆರವು ಒದಗಿಸಿ ಸಹಕಾರಿಯಾಗಲಿದೆ. ಯಾವುದೇ ಮಹಿಳೆ ಕೆಲಸದಿಂದ ಮನೆಗೆ ತಡವಾಗಿ ತೆರಳುವ ಸಂದರ್ಭದಲ್ಲಿ ಆಕೆ ಸುರಕ್ಷಿತವಾಗಿ ಮನೆಗೆ ತಲುಪುವವರೆಗೆ

ಆಕೆಯ ಚಲನ–ವಲನಗಳತ್ತ ಸೋದರನಂತೆ ನಿಗಾ ವಹಿಸಲು ನಿಯಂತ್ರಣಾ ಕೊಠಡಿಯನ್ನು ಕೋರಬಹುದು. ಈ ಸುರಕ್ಷತಾ ಸೇವೆಯನ್ನು 24*7 ಆಕೆ ಅಥವಾ ಆಕೆಯ ತಂದೆಎ–ತಾಯಿ ಬಳಸಬಹುದು. ಅಲ್ಲದೆ, ಈ ಸಹಾಯವಾಣಿಯು ಕಾರ್ಮಿಕ ಇಲಾಖೆಯಲ್ಲಿ ಭ್ರಷ್ಟಾಚಾರ ವಿರೋಧಿ ಸಹಾಯವಾಣಿಯಾಗಿಯೂ ಕಾರ್ಯನಿರ್ವಹಿಸಲಿದೆ. ಭ್ರಷ್ಟಾಚಾರಕ್ಕೆ ಸಂಬಂಧಿಸಿದಂತೆ ಕಾರ್ಮಿಕ ಇಲಾಖೆಯ ವ್ಯಾಪ್ತಿಯಲ್ಲಿನ ದೂರುಗಳನ್ನು ಈ ಸಹಾಯವಾಣಿಯಲ್ಲಿ ದಾಖಲಿಸಬಹದು.

ಶುಲ್ಕ ರಹಿತ ಕಾರ್ಮಿಕ ಸಹಾಯವಾಣಿಯು ಸ್ಥಾಪನೆಯಾದ ದಿನದಿಂದ 24*7 ಕಾರ್ಯನಿರ್ವಹಿಸುತ್ತದೆ ಮತ್ತು ದೂರುಗಳನ್ನು ಸ್ವೀಕರಿಸಿ ಪರಿಹರಿಸಲು ಸನ್ನದ್ಧವಾಗಿದೆ. ಕಾರ್ಮಿಕರು ಮತ್ತು ಕೈಗಾರಿಕೋದ್ಯಮಿಗಳ ಸಮಸ್ಯೆಗಳನ್ನು ಟ್ವಿಟರ್: @karmika_sahaya, ವಾಟ್ಸಾಪ್ ಮತ್ತು ಟೆಲಿಗ್ರಾಂ ಮೂಲಕ ಅದರ ಸಂಖ್ಯೆ 93333 33684 ಮತ್ತು ಇ–ಮೇಲ್ labourhelpline.karnataka.govt@gmail.com ಮೂಲಕವೂ ದೂರುಗಳನ್ನು ಸಲ್ಲಿಸಿ ಪರಿಹಾರ ಪಡೆದುಕೊಳ್ಳಬಹುದಾಗಿದೆ.

ಕಳೆದ ಅಕ್ಟೋಬರ್ 21 ರಿಂದ ಈಗಾಗಲೇ ಪ್ರಾಯೋಗಿಕವಾಗಿ ಪ್ರಾರಂಭವಾಗಿರುವ ಈ ಸಹಾಯವಾಣಿಯು ಒಟ್ಟು 9227 ವಿಷಯಸೂಚಿ ಡಾಕೆಟ್‌ಗಳನ್ನು ಸೃಜಿಸಿದೆ. ಅವುಗಳ ಪೈಕಿ 8642 ಡಾಕೆಟ್‌ಗಳಿಗೆ ಪರಿಹಾರವನ್ನು ಕಲ್ಪಿಸಿದೆ. ಸಹಾಯವಾಣಿ ತಂಡವು ಕುಂದು ಕೊರತೆಗಳಿಗೆ ಪರಿಹಾರ ಕಲ್ಪಿಸಕೊಡುವ ತನ್ನ ಗುರಿಯಲ್ಲಿ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕ ಸಾಧಿಸಿ ದೂರು ನಿವಾರಣೆಯ ಬಗ್ಗೆ ಮಾಹಿತಿ ಪಡೆದು ದೂರುದಾರರಿಗೆ ನಿಗದಿತ ಅವಧಿಯೊಳಗೆ ಮಾಹಿತಿ ನೀಡುತ್ತಿದೆ.

ವಿವಿಧ ಕಾರ್ಮಿಕ ಕಾನೂನುಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ, ಸಂಘಟಿತ ಮತ್ತು ಅಸಂಘಟಿತ ವಲಯದ ಕಾರ್ಮಿಕ ವರ್ಗದವರಿಗೆ ಸರ್ಕಾರದ ಸವಲತ್ತು ಮತ್ತು ಸೌಲಭ್ಯಗಳನ್ನು ಒದಗಿಸುವ ಯೋಜನೆಗಳು ಮತ್ತು ಕಾರ್ಯಕ್ರಮಗಳನ್ನು ವಿಸ್ತರಿಸಿ ಅವರ ಹಿತಾಸಕ್ತಿಯನ್ನು ಕಾಪಾಡುವ ಕಾರ್ಮಿಕ ಇಲಾಖೆಯ ಪ್ರಯತ್ನದ ಒಂದು ಭಾಗವಾಗಿ ಈ ಸಹಾಯವಾಣಿ ಕಾರ್ಯ ನಿರ್ವಹಿಸುತ್ತಿದೆ.

ಇದು ಕಾರ್ಮಿಕ ಇಲಾಖೆ ಮತ್ತು ಕಾರ್ಮಿಕರ ಅದರಲ್ಲೂ ವಿಶೇಷವಾಗಿ ಅಸಂಘಟಿತ ಕಾರ್ಮಿಕರು, ಬಾಲ ಕಾರ್ಮಿಕರು, ವಲಸೆ ಕಾರ್ಮಿಕರು, ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಇವರ ಮಧ್ಯೆ ಒಂದು ಸಂಪರ್ಕ ಸೇತುವೆಯೇ ಆಗಿದೆ.

ಕಾರ್ಮಿಕ ಇಲಾಖೆಯ ವ್ಯಾಪ್ತಿಯಲ್ಲಿನ ಕಾರ್ಮಿಕ ಇಲಾಖೆ, ಕಾರ್ಖಾನೆಗಳು, ಬಾಯ್ಲರುಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ, ಕರ್ನಾಟಕ ರಾಜ್ಯ ವಿಮಾ ಯೋಜನೆಯ ವೈದ್ಯಕೀಯ ಸೇವೆಗಳ ಇಲಾಖೆ, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಕರ್ನಾಟಕ ರಾಜ್ಯ ಅಸಂಘಟಿತೆ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಕರ್ನಾಟಕ ಕಾರ್ಮಿಕರ ಕಲ್ಯಾಣ ಮಂಡಳಿ ಹಾಗೂ ಕರ್ನಾಟಕ ರಾಜ್ಯ ಬಾಲಕಾರ್ಮಿಕ ಪದ್ಧತಿ ನಿರ್ಮೂಲನಾ ಯೋಜನಾ ಸೊಸೈಟಿಯ ಕಾರ್ಯ ಚಟುವಟಿಕೆಗಳತ್ತಲೂ ಈ ಸಹಾಯವಾಣಿಯು ಕುಂದು–ಕೊರತೆ ನಿವಾರಣಾ ಕಾರ್ಯವಿಧಾನವಾಗಿ

ಕಾರ್ಯನಿರ್ವಹಿಸುತ್ತದೆ. ಇದಲ್ಲದೆ, ಕಟ್ಟಡ ಮತ್ತು ಇತರೆ ನಿರ್ಮಾನ ಕಾರ್ಮಿಕರ ಕಲ್ಯಾಣ ಮಂಡಳಿಯು ಕಟ್ಟಡ ಕಾರ್ಮಿಕರಿಗೆ ಹೆಚ್ಚಿನ ಯೋಜನೆಗಳನ್ನು ವಿಸ್ತರಿಸಲು ಯೋಜಿಸಲಾಗಿದೆ.

ಸಹಾಯವಾಣಿಯ ಪ್ರಮುಖ ಉದ್ದೇಶಗಳು:

ಕಾರ್ಮಿಕರಲ್ಲಿ ಸರ್ಕಾರದ ವಿವಿಧ ಕಾರ್ಮಿಕ ಕಲ್ಯಾಣ ಕಾರ್ಯಕ್ರಮಗಲು ಮತ್ತು ಇತರೆ ಸಾಮಾಜಿಕ ಭದ್ರತಾ ಯೋಜನೆಗಳ ಬಗ್ಗೆ ಜಾಗೃತಿ ಮೂಡಿಸಿ ಅವರಲ್ಲಿ ಅದರ ಬಗ್ಗೆ ಜ್ಞಾನವನ್ನು ಹೆಚ್ಚಿಸುವುದು, ಕಾರ್ಮಿಕರನ್ನು ಕಾರ್ಮಿಕ ಕಲ್ಯಾಣ ಯೋಜನೆಗಳು ಮತ್ತು ಸಾಮಾಜಿಕ ಭದ್ರತಾ ಯೋಜನೆಗಳಿಗೆ ನೊಂದಾಯಿಸಿ ಅವರಿಗೆ ಅದರ ಪ್ರಯೋಜನ ತಲುಪುವಂತೆ ಮಾಡುವುದು, ಕಾರ್ಮಿಕರಿಗೆ ಅವರ ಉದ್ಯೋಗಕ್ಕೆ ಸಂಬಂಧಿಸಿದ ದೂರುಗಳು, ಕೆಲಸದ ಸ್ಥಳದಲ್ಲಿ ಸುರಕ್ಷತೆ, ಔದ್ಯೋಗಿಕ ಆರೋಗ್ಯ, ಕೆಲಸದ ಸಮಯವನ್ನು ನಿಯಂತ್ರಣ, ಕನಿಷ್ಠ ವೇತನ ಖಾತಿ ಮತ್ತು ವೇತನ ಪವತಿ, ಪ್ರಸೂತಿ ಸೌಲಭ್ಯ, ಬಾಲಕಾರ್ಮಿಕರ ನೇಮಕಾತಿ ಇತ್ಯಾದಿ ವಿಷಯಗಳಿಗೆ ಸಂಬಂಧಿಸಿದಮತೆ ಅವರ ಕುಂದುಕೊರತೆಗಳಿಗೆ ಪರಿಹಾರ ಒದಗಿಸುವುದು, ಕಾರ್ಮಿಕರಿಗೆ ಅವರ ಹಕ್ಕುಗಳು ಮತ್ತು ಬಾಧ್ಯತೆಗಳ ಬಗ್ಗೆ ಮಾಹಿತಿ ನೀಡುವುದಾಗಿದೆ.

## ಕೇಂದ್ರ ಬಜೆಟ್ : ಮುಖ್ಯಮಂತ್ರಿ ಅಭಿನಂದನೆ

**ಬೆಂಗಳೂರು ಫೆಬ್ರವರಿ 1 (ಕರ್ನಾಟಕ ವಾರ್ತೆ) :**

**ಯಾವುದೇ ಹೊಸ ತೆರಿಗೆ ಹಾಕದೆ ಅನೇಕ ಸುಧಾರಣಾ ಕ್ರಮಗಳನ್ನು ಈ ಸಾಲಿನ ಬಜೆಟ್‌ನಲ್ಲಿ ಅಳವಡಿಸಿದ್ದಕ್ಕಾಗಿ ದೇಶದ ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಹಣಕಾಸು ಸಚಿವೆ ನಿರ್ಮಲ ಸೀತಾರಾಮನ್ ಅವರನ್ನು ರಾಜ್ಯದ ಜನತೆಯ ಪರವಾಗಿ ಅಭಿನಂದಿಸುತ್ತೇನೆಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ತಿಳಿಸಿದರು.**

**ವಿಧಾನ ಸೌಧದ ಸಮಿತಿ ಕೊಠಡಿಯಲ್ಲಿ ಇಂದು ಪತ್ರಕರ್ತರನ್ನುದ್ದೇಶಿಸಿ ಆಯವ್ಯಯದ ಬಗ್ಗೆ ಪ್ರತಿಕ್ರಿಯೆ ನೀಡುತ್ತಾ ಮಾತನಾಡಿದ ಮುಖ್ಯಮಂತ್ರಿಗಳು ದೇಶದ ಇತಿಹಾಸದಲ್ಲೇ ಗ್ರಾಮೀಣ ಭಾಗದ ರೈತರಿಗೆ ಈ ಆಯವ್ಯಯದಲ್ಲಿ ಆದ್ಯತೆ ನೀಡಲಾಗಿದೆ. ರೈತರಿಗೆ ಕೇಂದ್ರದ ಬಜೆಟ್ ವರದಾನವಾಗಿದ. ರೈತರ ಉತ್ಪನ್ನಗಳನ್ನು ದ್ವಿಗುಣಗೊಳಿಸುವುದಕ್ಕೆ ಚಿಂತನೆ ನಡೆದಿರುವುದು ಸ್ಪಷ್ಟವಾಗಿ ಆಯವ್ಯಯದಲ್ಲಿ ಗೋಚರವಾಗುತ್ತದೆ ಎಂದರು. 100 ಜಲಕ್ಷಾಮ ಜಿಲ್ಲೆಗಳಲ್ಲಿ ಸೌರ ವಿದ್ಯುತ್ ಅಳವಡಿಸುವ ಮೂಲಕ ವಿದ್ಯುತ್ ಕ್ಷೇತ್ರದಲ್ಲಿ ಸ್ವಾವಲಂಬನೆ ತರಲು 20 ಲಕ್ಷ ರೈತರಿಗೆ ಸೌರ ವಿದ್ಯುತ್ ಸಂಪರ್ಕ ಕಲ್ಪಿಸುತ್ತಿರುವುದು ಉತ್ತಮ ಕೆಲಸ ಎಂದು ಮುಖ್ಯಮಂತ್ರಿಗಳು ತಿಳಿಸಿದರು.**

**ರಾಸಾಯನಿಕ ರಸಗೊಬ್ಬರ ದರ ಕಡಿಮೆ ಮಾಡಿ ರೈತರ ಆದಾಯ ದ್ವಿಗುಣಗೊಳಿಸಲು ಹಣಕಾಸು ಸಚಿವರು ಪ್ರಾಮಾಣಿಕ ಪ್ರಯತ್ನ ಮಾಡಿದ್ದಾರೆ. ರೈತರ ಉತ್ಪನ್ನಗಳನ್ನು ಸಾಗಾಣಿಕೆ ಮಾಡಲು ಕಿಸಾನ್ ರೈಲು ಹಾಗೂ ರಫ್ತು ಮಾಡಲು ಕಿಸಾನ್ ಉಡಾನ್ ಯೋಜನೆ ಪ್ರಕಟಿಸಿದ್ದಾರೆ. ರೈತರಿಗೆ ಅನುಕೂಲ ಕಲ್ಪಿಸಲು ಈ ಆಯವ್ಯಯದಲ್ಲಿ 2.83**

ಲಕ್ಷ ಕೋಟಿ ರೂಪಾಯಿ ಮೀಸಲಿರಿಸಿದ್ದಾರೆ. ಅಲ್ಲದೆ, ಆಯುಷ್ಮಾನ್ ಭಾರತ್ ಯೋಜನೆ ಹಾಗೂ ಪ್ರಮುಖ ನಗರಗಳಿಗೆ ಕೊಳವೆ ಮೂಲಕ ಶುದ್ಧ ನೀರು ಸರಬರಾಜು ಮಾಡುವ ಯೋಜನೆಗೆ 3.6 ಲಕ್ಷ ಕೋಟಿ ರೂ. ಮೀಸಲಿರಿಸಲಾಗಿದೆ ಎಂದರು. ವಿದ್ಯಾರ್ಥಿಗಳ ಉನ್ನತ ವ್ಯಾಸಂಗಕ್ಕಾಗಿ ಆನ್‌ಲೈನ್ ಮೂಲಕ ನೆರವು, ದೇಸಿ ಉತ್ಪನ್ನಗಳ ಮಾರಾಟಕ್ಕೆ ಆದ್ಯತೆ, ರಫ್ತು ಮಾಡಲು ಎಕ್ಸ್‌ಪೋರ್ಟ್ ಹಬ್‌ಗೆ ಉತ್ತೇಜನ ನೀಡಲಾಗಿದೆ ಎಂದು ತಿಳಿಸಿದರು.

ದೇಶಾದ್ಯಂತ ಮೂಲ ಸೌಕರ್ಯ ಕಲ್ಪಿಸಲು 1.00 ಲಕ್ಷ ಕೋಟಿ ರೂ. ಮೀಸಲು ಇಡಲಾಗಿದೆ. ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆಗಳಿಗೆ ಬಜೆಟ್‌ನಲ್ಲಿ ಒತ್ತು ನೀಡಲಾಗಿದೆ ಎಂದರು.

18.600 ಕೋಟಿ ರೂ. ವೆಚ್ಚದಲ್ಲಿ ಬೆಂಗಳೂರು ಉಪನಗರ ಯೋಜನೆಗೆ ಆದ್ಯತೆ ನೀಡಿದ್ದು, ಕೇಂದ್ರ ಹಾಗೂ ರಾಜ್ಯ ಸರ್ಕಾರ ಶೇ. 20 ರಷ್ಟು ಹಾಗೂ ಖಾಸಗಿ ಸಹಭಾಗಿತ್ವದಲ್ಲಿ ಯೋಜನೆ ಕೈಗೆತ್ತಿಕೊಳ್ಳಲು ಆದ್ಯತೆ ನೀಡಲಾಗಿದೆ. ಯುವಕರಿಗೆ ಉದ್ಯೋಗ ಸೃಷ್ಟಿಸುವ ಸಂಬಂಧ ರಾಷ್ಟ್ರೀಯ ನೇಮಕಾತಿ ಆಯೋಗ ರಚನೆ ಮಾಡಿರುವುದು ಯುವಜನರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಮಾತನಾಡಿದ ಮುಖ್ಯಮಂತ್ರಿಗಳು ಬೆಂಗಳೂರು ಮತ್ತು ಚೆನ್ನೈ ಮಧ್ಯ ರೈಲ್ವೆ ಯೋಜನೆಗಳಿಗೆ ಮಂಜೂರಾತಿ ನೀಡಿರುವುದನ್ನು ಮುಖ್ಯಮಂತ್ರಿಗಳು ಪ್ರಶಂಸಿಸಿದರು.

ಇದೊಂದು ರೈತರ ಪರ ಬಜೆಟ್ ಆಗಿದೆ ಎಂದು ಮಾತನಾಡಿದ ಮುಖ್ಯಮಂತ್ರಿಗಳು 2020 ರ ಆಯವ್ಯಯವನ್ನು ಬಲವಾಗಿ ಸಮರ್ಥಿಸಿಕೊಂಡರು.

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು ಫೆಬ್ರವರಿ 1 (ಕರ್ನಾಟಕ ವಾರ್ತೆ) :**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 02-02-2020** ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಕಬ್ಬನ್ ಉದ್ಯಾನವನದ ಆವರಣದಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

2) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**I ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 6.30 ಗಂಟೆಯಿಂದ ಬೆಳಿಗ್ಗೆ 7.30 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ **ಡಾ. ವಾಣಿ ವಿಶ್ವನಾಥ್ ಮತ್ತು ಶ್ರೀಮತಿ ನಮ್ರತ ಮಹೇಂದ್ರಕುಮಾರ್ ರವರಿಂದ ಭರತನಾಟ್ಯ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

## ಸಚಿವರ ಪ್ರವಾಸ

**ಬೆಂಗಳೂರು ಫೆಬ್ರವರಿ 1 (ಕರ್ನಾಟಕ ವಾರ್ತೆ) :**

**ವಸತಿ, ತೋಟಗಾರಿಕೆ ಮತ್ತು ರೇಷ್ಮೆ ಸಚಿವ ವಿ. ಸೋಮಣ್ಣ ಅವರು ಫೆಬ್ರವರಿ 2 ರಂದು ಮೈಸೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ರಾತ್ರಿ ಕೇಂದ್ರಸ್ಥಾನಕ್ಕೆ ಹಿಂತಿರುಗುವರು.**

## ಕಲಬುರಗಿಯ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ 10 ಕೋಟಿ ಅನುದಾನ ಬಿಡುಗಡೆ

**ಬೆಂಗಳೂರು ಫೆಬ್ರವರಿ 1 (ಕರ್ನಾಟಕ ವಾತೆ)**

**ಕಲಬುರಗಿಯಲ್ಲಿ ಫೆಬ್ರವರಿ 5 ರಿಂದ 7 ರವರೆಗೆ ಜರುಗಲಿರುವ 85 ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಆಚರಣೆಗಾಗಿ ಈಗಾಗಲೇ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕ್ರಿಯಾ ಯೋಜನೆಯಲ್ಲಿ ಅವಕಾಶ ಕಲ್ಪಿಸಿರುವಂತೆ ರೂ 1.00 ಕೋಟಿ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.**

**ಸಾಹಿತ್ಯ ಸಮ್ಮೇಳನದ ಆಯೋಜನೆಗಾಗಿ ಹೆಚ್ಚುವರಿಯಾಗಿ ರೂ 10.00 ಕೋಟಿಗಳ ಅನುದಾನವನ್ನು ಕಲಬುರಗಿ ಜಿಲ್ಲಾಧಿಕಾರಿಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಬಿಡುಗಡೆಮಾಡಲಾಗಿದೆ. ಈ ಸಮ್ಮೇಳನಕ್ಕೆ ಒಟ್ಟು 11.00 ಕೋಟಿಗಳ ಅನುದಾನವನ್ನು ಸರ್ಕಾರ ಬಿಡುಗಡೆಗೊಳಿಸಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ**

## <u>ತಂಬಾಕುವಿನ ದುಷ್ಪರಿಣಾಮಗಳ ಕುರಿತು</u>
## <u>ವಿದ್ಯಾರ್ಥಿಗಳೊಂದಿಗೆ ಬಾಲ ಪರಿಷತ್ ಕಾರ್ಯಕ್ರಮ</u>

**ಬೆಂಗಳೂರು ಫೆಬ್ರವರಿ 1 (ಕರ್ನಾಟಕ ವಾರ್ತೆ)**

ಸೊಸೈಟಿ ಫಾರ್ ಪೀಪಲ್ಸ್ ಆಕ್ಷನ್ ಫಾರ್ ಡೆವಲಪ್‌ಮೆಂಟ್ (ಸ್ಪಾಡ್) ಹಾಗೂ ಬಾಲ ಪರಿಷತ್ ವತಿಯಿಂದ ಫೆಬ್ರವರಿ 4 ರಂದು ಬೆಳಿಗ್ಗೆ 10.30 ರಿಂದ 1.00 ಗಂಟೆಯವರೆಗೆ 7, 8 ಹಾಗೂ 9ನೇ ತರಗತಿ ವಿದ್ಯಾರ್ಥಿಗಳ ಜೊತೆ ತಂಬಾಕಿನಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಕಬ್ಬನ್ ಪಾರ್ಕ್‌ನ ಸಚಿವಾಲಯ ಕ್ಲಬ್‌ನ ಚೆನ್ನಬಸಪ್ಪ ಸಭಾಂಗಣದಲ್ಲಿ ಚರ್ಚೆಯನ್ನು ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮದಲ್ಲಿ ಪ್ರಾಥಮಿಕ ಹಾಗೂ ಮಾಧ್ಯಮಿಕ ಶಿಕ್ಷಣ ಸಚಿವ ಸುರೇಶ್ ಕುಮಾರ್, ಹಾಗೂ ವಿಧಾನ ಪರಿಷತ್ ಸದಸ್ಯ ಅ. ದೇವೇಗೌಡ ಅವರು ಪಾಲ್ಗೊಳ್ಳಲಿದ್ದಾರೆ.

ಈ ಸಂದರ್ಭದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ನಿರ್ದೇಶಕರು, ಪೊಲೀಸ್ ಆಯುಕ್ತರು, ಬೆಂಗಳೂರು ನಗರ, ಮಾಧ್ಯಮಿಕ ಶಿಕ್ಷಣ ಇಲಾಖೆ ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಉಪ ನಿರ್ದೇಶಕರು (ತಂಬಾಕು ಘಟಕ) ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

## <u>ಕನ್ನಡ ಮಾಧ್ಯಮ ಪ್ರಶಸ್ತಿ ಪ್ರದಾನ ಸಮಾರಂಭ</u>

**ಬೆಂಗಳೂರು ಫೆಬ್ರವರಿ 1 (ಕರ್ನಾಟಕ ವಾರ್ತೆ) :**

**ಕನ್ನಡ ಅಭಿವೃದ್ಧಿ ಪ್ರಾಧಿಕಾರ ಫೆಬ್ರವರಿ 2 ರಂದು ಬೆಳಿಗ್ಗೆ 10-30 ಗಂಟೆಗೆ ಬೆಂಗಳೂರಿನ ವಸಂತನಗೆ ಮಿಲ್ಲರ್ ರಸ್ತೆಯಲ್ಲಿರುವ ಡಾ : ಬಿ.ಆರ್. ಅಂಬೇಡ್ಕರ್ ಭವನದಲ್ಲಿ 2019-20 ನೇ ಸಾಲಿನ ಕನ್ನಡ ಮಾಧ್ಯಮ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಹಮ್ಮಿಕೊಂಡಿದೆ.**

**ಎಸ್.ಎಸ್.ಎಲ್.ಸಿ. ಹಾಗೂ ಪಿ.ಯು.ಸಿ. ಸೇರಿದಂತೆ ಒಟ್ಟು 366 ವಿದ್ಯಾರ್ಥಿಗಳನ್ನು ಗೌರವಿಸಿ ಸನ್ಮಾನಿಸಲಾಗುತ್ತಿದ್ದು ಕಂದಾಯ ಹಾಗೂ ಪೌರಾಡಳಿತ ಸಚಿವ ಆರ್. ಅಶೋಕ್ ಅವರು ಈ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಕನ್ನಡ ಮತ್ತು ಸಂಸ್ಕೃತಿ, ಪ್ರವಾಸೋದ್ಯಮ ಸಚಿವ ಸಿ.ಟಿ. ರವಿ ಅವರು ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆಂದು ಪ್ರಕಟಣೆ ತಿಳಿಸಿದೆ.**